ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪರಿಶಿಷ್ಟ ಜಾತಿ/ಪಂಗಡದ ಆಡಳಿತ ಮಂಡಳಿ ವತಿಯ ಒಟ್ಟು 59 ಪ್ರಾಥಮಿಕ ಶಾಲೆಗಳ ಹಾಗೂ 223 ಪ್ರೌಢಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಈವರೆವಿಗೂ ಪ್ರಸ್ತಾವನೆ ಬಂದಿರುತ್ತವೆ.

ಆ) ರಾಜ್ಯದಲ್ಲಿ ಈವರೆವಿಗೂ ಒಟ್ಟು 183 ಪ್ರೌಢಶಾಲೆಗಳನ್ನು ಹಾಗೂ 53 ಪ್ರಾಥಮಿಕ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆ.

ಇ) ಇಲಾಖೆಯು ನಿಗದಿಪಡಿಸಿದ ನಮೂನೆಯಲ್ಲಿ [ದಿನಾಂಕ: 13–09–2002ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 65 ವಿವಿಧ 97 ಮತ್ತು ದಿನಾಂಕ: 20–02–2004ರ ಸರ್ಕಾರಿ ಸುತ್ತೋಲೆ ಸಂಖ್ಯೆ: ಇಡಿ 110 ಎಸ್‌ಇಪಿ 2003 [ಭಾಗ–2] ರನ್ವಯ] ಸಂಬಂಧಿಸಿದ ಸಂಸ್ಥೆ ಸಂಪೂರ್ಣ ಮಾಹಿತಿಯನ್ನು ಒಳಗೊಂಡ ಪ್ರಸ್ತಾವನೆಗಳನ್ನು ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರಕ್ಕೆ ಪರಿಶೀಲನೆಗೆ ಕಳುಹಿಸಬೇಕಾಗಿರುತ್ತದೆ. ಸಕ್ಷಮ ಪ್ರಾಧಿಕಾರದಿಂದ ಸರ್ಕಾರದಲ್ಲಿ ಸ್ವೀಕೃತವಾದ ಇಂತಹ ಪ್ರಸ್ತಾವನೆಗಳನ್ನು ಸರ್ಕಾರದ ಹಂತದಲ್ಲಿ ನಿಯಮಾನುಸಾರ ಪರಿಶೀಲಿಸಿ ಸಂಬಂಧಿಸಿದ ಶಾಲೆಯನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲಾಗುತ್ತಿದೆ.

61 (12) ಶ್ರೀ ಎಸ್.ಎಸ್. ಪಾಟೀಲ್ (ಮುಂಡರಗಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿನ ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕ ಮತ್ತು ಬೋಧಕೇತರ ಖಾಲಿ ಇರುವ ಹುದ್ದೆಗಳು ಎಷ್ಟು [ವಿವರ ನೀಡುವುದು]

ಆ) ಅವುಗಳನ್ನು ತುಂಬಲು ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡಲಾಗುವುದೇ?

ಇ) ಅನುಮತಿ ಕೊಡದಿದ್ದರೆ, ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ?

ಈ) ಇದ್ದಲ್ಲಿ, ಕೂಡಲೇ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಅನುಮತಿ ನೀಡುವುದೇ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳು 563

ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳು 2512

ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳು 252

ಆ) ಮತ್ತು ಇ) ಗೆ ಉತ್ತರ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ಸಾಮಾನ್ಯ ವರ್ಗದ ಆಡಳಿತ ಮಂಡಳಿಯ ವತಿಯಿಂದ ನಡೆಯುತ್ತಿರುವ ಪ್ರಾಥಮಿಕ ಶಾಲೆಗಳಲ್ಲಿರುವ ಖಾಲಿ ಹುದ್ದೆಗಳಿಗೆ ಹೆಚ್ಚುವರಿ ಶಿಕ್ಷಕರಿಂದ ಮರು ಹೊಂದಾಣಿಕೆ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ದಿನಾಂಕ: 05–07–2004ರ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 2 ಬಿಇಎಂ 2003 ಮಿತವ್ಯಯಕ್ಕೆ ಸಂಬಂಧಿಸಿದ ಆದೇಶದ ಅನ್ವಯ ಇತರೆ ಅಂಶಗಳ ಜೊತೆಗೆ ಈ ಕೆಳಕಂಡಂತೆ ಸೂಚಿಸಲಾಗಿದೆ:

> " (g) The ban on creation and filling up of posts both under plan and non-plan through direct recruitment continues. All promotions, recruitment and post creation ofany kind would require prior concurrence of Finance Department. Proposals for creation of posts, recruitment, and promotions will not be considered unless the proportion of vacant posts as indicated in D.P.A.R.'s U.O. Note No: ಸಿಅಸುಇ 02 ಈಕಾಅ 2004, ದಿನಾಂಕ: 01–03–2004, is abolished.
>
> (h) Theban on recruitment / creation and filling up of posts also covers all Grant-inAid Institution.
>
> (i) All the existing vacant posts or those falling vacant under Grnat-in-Aid Institutions should remain vacant without exception until further orders".

ಅದರನ್ವಯ ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ನೀಡಲು ಅವಕಾಶವಿರುವುದಿಲ್ಲ. ಈ ನಿಷೇಧವನ್ನು ಸಡಿಲಿಸಿ, ಅನುದಾನಿತ ಖಾಸಗಿ ಪ್ರೌಢಶಾಲೆಗಳಲ್ಲಿನ 2106 ಮತ್ತು ಅನುದಾನಿತ ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿನ 282 [ಒಟ್ಟು 2388] ಬೋಧಕ ಹುದ್ದೆಗಳನ್ನು ತುಂಬಲು ಆರ್ಥಿಕ ಮಿತವ್ಯಯ ಸಡಿಲಿಸಿ, ಸದ್ಯದಲ್ಲೆ ಆದೇಶವನ್ನು ಹೊರಡಿಸಲಾಗುವುದು.

ಈ) ಮೇಲೆ ಉಲ್ಲೇಖಿಸಿರುವ ಬೋಧಕ ಹುದ್ದೆಗಳನ್ನು ತುಂಬಲು ಅನುಮತಿ ನೀಡಿ ಸದ್ಯದಲ್ಲೇ ಸರ್ಕಾರಿ ಆದೇಶವನ್ನು ಹೊರಡಿಸಲಾಗುವುದು. ಬೋಧಕೇತರ ಹುದ್ದೆಗಳನ್ನು ತುಂಬಲು ಆರ್ಥಿಕ ಮಿತವ್ಯಯ ಮುಂದುವರೆದಿದೆ.

62 (13) ಶ್ರೀ ಎಸ್.ಎಸ್. ಪಾಟೀಲ್ (ಮುಂಡರಗಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮುಂಡರಗಿ ಮತದಾರ ಕ್ಷೇತ್ರಕ್ಕೆ ಸೇರಿದ ಮುಂಡರಗಿ ಪಟ್ಟಣ ಪಂಚಾಯತ್ ಹಾಗೂ ಗದಗ ತಾಲ್ಲೂಕಿನ ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ನಿವೇಶನ ರಹಿತರ ಸಂಖ್ಯೆ ಎಷ್ಟು;

ಆ) ಅವರಿಗೆ ನಿವೇಶನ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;